All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

23.12.2025 6.40 p.m.

***************

ಮುಖ್ಯಾಂಶಗಳು

- ನವದೆಹಲಿಯಲ್ಲಿ ಕೇಂದ್ರ ಸಚಿವ ಮನೋಹರ್ ಲಾಲ್ ಭೇಟಿ ಮಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ - ಬೆಂಗಳೂರು ಮೆಟ್ರೋ ಯೋಜನೆ ಕುರಿತಂತೆ ಚರ್ಚೆ
- ಬೆಂಗಳೂರು-ಕರಾವಳಿ ಜಿಲ್ಲೆಗಳ ನಡುವೆ ವಂದೇ ಭಾರತ್ ರೈಲು ಆರಂಭಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮನವಿ
- ಬೆಂಗಳೂರಿನ ಹೆಚ್‌ಎಎಲ್‌ನಲ್ಲಿ ಜಯ ಚಾಮರಾಜೇಂದ್ರ ಒಡೆಯರ್ ಪುತ್ಥಳಿ ಅನಾವರಣ
- ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಪತ್ರ ಬರೆದ ಮಾಜಿ ಸಚಿವ ಕೆ.ಎನ್. ರಾಜಣ್ಣ - ಸಚಿವ ಸ್ಥಾನ ಕಳೆದುಕೊಂಡ ಬಗ್ಗೆ ಉಲ್ಲೇಖ

***************

ನವದೆಹಲಿಯಲ್ಲಿಂದು ಕೇಂದ್ರ ವಿದ್ಯುಚ್ಛಕ್ತಿ ಮತ್ತು ನಗರಾಭಿವೃದ್ಧಿ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಖಟ್ಟರ್ ಅವರನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್, ೨೦೨೭ರಲ್ಲಿ ಬೆಂಗಳೂರಿನಲ್ಲಿ ೧೭೫ ಕಿಲೋಮೀಟರ್ ಮೆಟ್ರೋ ಯೋಜನೆ ಪೂರ್ಣಗೊಳ್ಳಬೇಕಾಗಿದೆ. ಹೀಗಾಗಿ ಶೀಘ್ರವೇ ಕೇಂದ್ರ ಸರ್ಕಾರ ಕ್ಲಿಯರೆನ್ಸ್ ನೀಡುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಇಂದು ನಡೆಯುವ ನದಿಗಳ ಜೋಡಣೆ ಕುರಿತ ಜಲಶಕ್ತಿ ಸಚಿವರ ಸಭೆಯಲ್ಲಿ ಮೇಕೆದಾಟು, ಮಹದಾಯಿ, ಕೃಷ್ಣ, ತುಂಗಭದ್ರಾ ಯೋಜನೆ ಕುರಿತಂತೆ ಚರ್ಚಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಭಾರತದ ಪ್ರತಿಷ್ಠಿತ ವಿಮಾನ ತಯಾರಿಕಾ ಮತ್ತು ಸಂಶೋಧನಾ ಸಂಸ್ಥೆ - ಹೆಚ್.ಎ.ಎಲ್. ಗೆ ಬೆಂಗಳೂರಿನಲ್ಲಿ ೭೦೦ ಎಕರೆ ಭೂಮಿ ಹಾಗೂ ೨೫ ಲಕ್ಷ ರೂಪಾಯಿ ಹೂಡಿಕೆ ನೀಡಿದ ಜಯಚಾಮರಾಜೇಂದ್ರ ಒಡೆಯರ್ ದೇಶೀಯ ಉತ್ಪನ್ನ ತಯಾರಿಕೆಯಲ್ಲಿ ತಮ್ಮದೇ ಆದ

ಮಹತ್ವಪೂರ್ಣ ಕೊಡುಗೆ ನೀಡಿದ್ದರು ಎಂದು ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಜಯಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಇಂದು ಹೆಚ್.ಎ.ಎಲ್. ಏರ್ಪಡಿಸಿದ್ದ ೮೫ನೇ ಪ್ರತಿಷ್ಠಾಪನಾ ದಿನಾಚರಣೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭಾರತಕ್ಕೆ ಸ್ವಾತಂತ್ರ್ಯ ದೊರೆತಾಗ ಸ್ವ-ಇಚ್ಛೆಯಿಂದ ಮೈಸೂರು ಮಹಾರಾಜರು ಭಾರತದೊಂದಿಗೆ ವಿಲೀನರಾದರು. ಅನ್ಯ ರಾಜವಂಶಸ್ಥರ ಆಳ್ವಿಕೆಯಲ್ಲಿದ್ದ ಪ್ರದೇಶಗಳನ್ನು ಭಾರತದೊಂದಿಗೆ ವಿಲೀನಗೊಳಿಸಲು ಸರ್ದಾರ್ ವಲ್ಲಭಭಾಯಿ ಪಟೇಲ್ ಶ್ರಮಿಸಿದಾಗ ಒಡೆಯರ್ ಅದಕ್ಕೆ ಪೂರಕ ಸಮರ್ಥನೆ ನೀಡಿದ್ದರು ಎಂದು ಹೇಳಿದ್ದಾರೆ.

ಧ್ವನಿ : ಸಂಸದ ಯದುವೀರ್ ಒಡೆಯರ್

ಈ ಸಂದರ್ಭದಲ್ಲಿ ಮಾತನಾಡಿದ ಹೆಚ್‌ಎಎಲ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾದ ಡಾ. ಡಿ.ಕೆ. ಸುನೀಲ್, ಹೆಚ್‌ಎಎಲ್ ಭಾರತದ ಪ್ರಮುಖ ಯೋಜನೆಗಳಲ್ಲಿ ಮುಖ್ಯ ಪಾತ್ರ ವಹಿಸುತ್ತಿದೆ. ತನ್ನ ಆಡಳಿತ ಸ್ವರೂಪ ಮತ್ತು ಉತ್ಪಾದನಾ ಘಟಕಗಳ ಆಧುನೀಕರಣದತ್ತ ಹೆಚ್ಚಿನ ಒತ್ತು ನೀಡುತ್ತಿದೆ.

ರಕ್ಷಣಾ ಕ್ಷೇತ್ರಕ್ಕೆ ಅತ್ಯಾವಶ್ಯಕವಾದ ಯುದ್ಧ ವಿಮಾನಗಳ ಪೂರೈಕೆಗೆ ಆದ್ಯತೆ ನೀಡುತ್ತಾ, ಸ್ವದೇಶಿ ಮತ್ತು ಸ್ವಾವಲಂಬಿ ಸ್ಥಾನಮಾನಗಳಿಸಲು ಶ್ರಮಿಸುತ್ತಿದೆ ಎಂದು ಹೇಳಿದರು.

ಈಗಾಗಲೇ ಹೆಚ್‌ಎಎಲ್-ಹೆಚ್‌ಟಿಟಿ-೪೦ ತರಬೇತಿ ವಿಮಾನ ಉತ್ಪಾದನೆಗೆ ಚಾಲನೆ ನೀಡಿದೆ. ಎಲ್‌ಸಿಎ ತೇಜಸ್ ಮಾರ್ಕ್-೧ಎ ದರ್ಜೆಯ ೯೭ ಯುದ್ಧ ವಿಮಾನಗಳನ್ನು ವಾಯುಸೇನೆಗೆ ಪೂರೈಸಲು ಆರಂಭಿಸಿದೆ. ಯಶಸ್ಸ್ ಜೆಟ್ ಟ್ರೈನರ್ ಹಾಗೂ ಹಗುರ ಹೆಲಿಕಾಪ್ಟರ್, ಆಧುನಿಕ ಹಗುರ ಹೆಲಿಕಾಪ್ಟರ್ ತಯಾರಿಕೆಯಲ್ಲಿಯೂ ಮುಂಚೂಣಿಯಲ್ಲಿದೆ. ಎಲ್‌ಸಿಎ ಹಗುರ ಯುದ್ಧ ವಿಮಾನಕ್ಕೆ ಶಸ್ತ್ರಾಸ್ತ್ರಗಳನ್ನು ಜೋಡಿಸುವ ಕಾರ್ಯ ಯಶಸ್ವಿಯಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಈ ಸಂದರ್ಭದಲ್ಲಿ ಜಯಚಾಮರಾಜೇಂದ್ರ ಒಡೆಯರ್ ಅವರ ಪುತ್ಥಳಿಯನ್ನು ಹೆಚ್‌ಎಎಲ್‌ನ ಆವರಣದಲ್ಲಿ ಅನಾವರಣಗೊಳಿಸಲಾಯಿತು.

***************

ರಾಜಧಾನಿ ಬೆಂಗಳೂರು ಹಾಗೂ ರಾಜ್ಯದ ಕರಾವಳಿ ಪ್ರದೇಶಗಳ ನಡುವೆ ಪ್ರಯಾಣವನ್ನು ಮತ್ತಷ್ಟು ಸುಲಭಗೊಳಿಸುವ ನಿಟ್ಟಿನಲ್ಲಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಆರಂಭಿಸುವಂತೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಮಾಡಿದ್ದಾರೆ.

ಈ ಸಂಬಂಧ ರೈಲ್ವೆ ಸಚಿವರಿಗೆ ಪತ್ರ ಬರೆದಿರುವ ಕುಮಾರಸ್ವಾಮಿ, ಬೆಂಗಳೂರು ನಗರದಿಂದ ಹಾಸನ-ಮಂಗಳೂರು ಜಂಕ್ಷನ್-ಉಡುಪಿ ಮತ್ತು ಕಾರವಾರ ಮಾರ್ಗವಾಗಿ ಗೋವಾದ ಮಡಗಾಂವ್‌ವರೆಗೆ ಅತಿವೇಗದ ವಂದೇ ಭಾರತ್ ರೈಲು ಸೇವೆ ಆರಂಭಿಸುವಂತೆ ಕೋರಿದ್ದಾರೆ.

ಈ ಭಾಗದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ವಂದೇ ಭಾರತ್ ರೈಲು ಸಂಚಾರಕ್ಕೆ ಅವಕಾಶ ನೀಡುವುದರಿಂದ ಕರಾವಳಿ ಭಾಗದ ಜನರಿಗೆ ಹೆಚ್ಚು ಅನುಕೂಲವಾಗಲಿದೆ. ಅಭಿವೃದ್ಧಿಗೂ ಹೆಚ್ಚು ಪೂರಕವಾಗಿರುತ್ತದೆ ಎಂದು ಸಚಿವರ ರೈಲ್ವೆ ಸಚಿವರ ಗಮನ ಸೆಳೆದಿದ್ದಾರೆ.

***************

ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು, ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಅವರಿಗೆ ೮ ಪುಟಗಳ ಸುದೀರ್ಘ ಪತ್ರ ಬರೆದಿದ್ದು, ಅದರಲ್ಲಿ ರಾಜ್ಯ ರಾಜಕಾರಣದ ಅನೇಕ ಮಹತ್ವದ ವಿಚಾರಗಳನ್ನು ಪ್ರಸ್ತಾಪಿಸಿದ್ದಾರೆ.

ಪತ್ರದಲ್ಲಿ ರಾಹುಲ್ ಗಾಂಧಿಯವರ ಭೇಟಿಗೆ ಅವಕಾಶ ಕೇಳಿದ್ದಾರೆ. ಏನೂ ತಪ್ಪು ಮಾಡದೇ ಸಚಿವ ಸ್ಥಾನ ಕಳೆದುಕೊಂಡಿದ್ದೇನೆ ಎಂದು ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ. ಸಹಕಾರ ಕ್ಷೇತ್ರದಲ್ಲಿ ಮೀಸಲಾತಿ ತಂದಿದ್ದು, ಭ್ರಷ್ಟಾಚಾರ ರಹಿತವಾಗಿ ಕಾರ್ಯ ನಿರ್ವಹಿಸಿದ್ದೇನೆ. ನನ್ನ ವಿರುದ್ಧ ತಮಗೆ ತಪ್ಪು ಮಾಹಿತಿ ನೀಡಿದವರ ವಿರುದ್ಧ ಕ್ರಮ ಆಗಬೇಕು. ಜೊತೆಗೆ ಈ ಬಗ್ಗೆ ಕೂಲಂಕುಷವಾಗಿ ಚರ್ಚಿಸಲು ಅವಕಾಶ ನೀಡುವಂತೆ ಮನವಿ ಮಾಡಿದ್ದಾರೆ.

***************

ರೈತರು ಬೆವರು ಸುರಿಸಿ ಬೆಳೆದ ಬೆಳೆಗಳಿಂದಲೇ ನಮ್ಮ ಬದುಕು ಇಂದು ಸಾಗುತ್ತಿದೆ ಎಂದು ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿ ನಡೆದ ರಾಷ್ಟ್ರೀಯ ರೈತರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಕೃತಿಯ ಸವಾಲುಗಳು, ಮಾರುಕಟ್ಟೆ ಅಸ್ಥಿರತೆಗಳ ನಡುವೆಯೂ ರೈತರು ಆಹಾರ ಭದ್ರತೆಯನ್ನು ಕಾಪಾಡುತ್ತಿರುವುದು ಅಭಿನಂದನೀಯವಾಗಿದೆ ಎಂದು ಹೇಳಿದ್ದಾರೆ.

ಯಾವ ರೈತರೂ ಕೂಡ ಆತುರದಿಂದ ಆತ್ಮಹತ್ಯೆ ಮಾಡಿಕೊಳ್ಳಬಾರದು. ಚನ್ನರಾಯಪಟ್ಟಣದ ರೈತರ ಸಂಪೂರ್ಣ ಭೂಮಿಯನ್ನು ಮುಖ್ಯಮಂತ್ರಿಗಳು ಕೈ ಬಿಟ್ಟಿರುವುದು ಸಂತಸದ ವಿಷಯ ಎಂದು ಸ್ಪಷ್ಟಪಡಿಸಿದ್ದಾರೆ.

***************

ಬೆಂಗಳೂರಿನ ಅರಮನೆ ಮೈದಾನದಲ್ಲಿ ಇದೇ ೨೫ರಿಂದ ೨೮ರವರೆಗೆ ೨ನೇ ವಿಶ್ವ ಆಯುರ್ವೇದ ಶೃಂಗಸಭೆ ನಡೆಯಲಿದೆ ಎಂದು ಖ್ಯಾತ ಆಯುರ್ವೇದ ತಜ್ಞ ಡಾ. ಗಿರಿಧರ ಕಜೆ ತಿಳಿಸಿದ್ದಾರೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು, ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

ಕೇಂದ್ರ ಸರ್ಕಾರದ ಆಯುಷ್ ಮಂತ್ರಾಲಯ ಹಾಗೂ ರಾಜ್ಯಸರ್ಕಾರದ ಆಯುಷ್ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ವೈದ್ಯರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

ಆರೋಗ್ಯಯುತ ಜೀವನಪದ್ಧತಿ ಮುಂಜಾಗ್ರತಾ ಕ್ರಮಗಳು ಮತ್ತು ಸ್ವಾಸ್ಥ್ಯವರ್ಧನೆ ಮಾಡುವ ಆಹಾರ ಪದ್ಧತಿಗಳ ಕುರಿತು ಅರಿವು ಮೂಡಿಸಲು ವಿಶೇಷ ಪ್ರಯತ್ನ ನಡೆದಿದೆ ಎಂದು ಡಾ. ಗಿರಿಧರ ಕಜೆ ತಿಳಿಸಿದ್ದಾರೆ.

ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ೨೦೦ ಸಂಸ್ಥೆಗಳು ಆಯುರ್ವೇದ ಉತ್ಪನ್ನಗಳ ಪ್ರದರ್ಶನದಲ್ಲಿ ಭಾಗವಹಿಸಲಿವೆ. ಸಾರ್ವಜನಿಕರಿಗೆ ಮುಕ್ತ ಪ್ರವೇಶ ಅವಕಾಶ ಕಲ್ಪಿಸಲಾಗಿದೆ.

***************

ಕಾರ್ಖಾನೆಗಳಲ್ಲಿ ಸಂಭವಿಸಬಹುದಾದ ರಾಸಾಯನಿಕ ಸೋರಿಕೆ ವಿಪತ್ತನ್ನು ಮುಂಜಾಗ್ರತೆ ಹಾಗೂ ಸುರಕ್ಷತಾ ಕ್ರಮಗಳ ಮೂಲಕ ತಡೆಯಲು ಸಾಧ್ಯವಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಸೈಯದ್ ಆಯಿಶಾ ತಿಳಿಸಿದ್ದಾರೆ.

"ರಾಸಾಯನಿಕ ಸೋರಿಕೆ ನಿರ್ವಹಣೆ ದಿನ-೨೦೨೫" ಅಂಗವಾಗಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಈ ಕುರಿತು ಜಾಗೃತಿ ಮೂಡಿಸಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ.

ಕೈಗಾರಿಕೆಗಳು, ಕಾರ್ಖಾನೆಗಳಲ್ಲಿ ಸಂಭವಿಸಬಹುದಾದ ವಿಪತ್ತುಗಳನ್ನು ಎದುರಿಸಲು ಅಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಅರಿವು ಮೂಡಿಸುವ ಜೊತೆಗೆ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು ಎಂದು ಸೂಚನೆ ನೀಡಿದ್ದಾರೆ.

***************

ಕೋಲಾರ ಜಿಲ್ಲೆಯಲ್ಲಿ ಹೆಚ್ಚುತ್ತಿರುವ ರಸ್ತೆ ಅಪಘಾತಗಳನ್ನು ನಿಯಂತ್ರಿಸಲು ಮತ್ತು ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಸಭೆಯಲ್ಲಿ ಮಂಡಿಸಲಾದ ಐ-ರಾಡ್ ವರದಿಯು ಜಿಲ್ಲೆಯ ರಸ್ತೆ ಸುರಕ್ಷತೆಯ ಕುರಿತು ಕಳವಳ ವ್ಯಕ್ತಪಡಿಸಿದೆ. ೨೦೨೩ ರಿಂದ ೨೦೨೫ರ ಅವಧಿಯಲ್ಲಿ ಜಿಲ್ಲೆಯಲ್ಲಿ ಒಟ್ಟು ೪ ಸಾವಿರದ ೧೭೩ ಅಪಘಾತಗಳು ಸಂಭವಿಸಿದ್ದು, ಇದರಲ್ಲಿ ೧ ಸಾವಿರದ ೨೭೨ ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ಹೇಳಿದ್ದಾರೆ.

ರಾಷ್ಟ್ರೀಯ ಹೆದ್ದಾರಿ-೭೫ ರಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******ಮುಕ್ತಾಯ********